ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

# ಜುಲೈ 2022 : ವಾರ್ಡ್ ಸಮಿತಿಯ 1ನೇ ಸಭೆಯ ನಡವಳಿಗಳು

***********

ಉಲ್ಲೇಖ : ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21.
ದಿನಾಂಕ: 22-09-2021.

******

ದಿನಾಂಕ : 04-07-2022.

ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕಾನಂದ ಉದ್ಯಾನವನ, ಗಿರಿನಗರ

ಸಮಯ : ಪೂರ್ವಾಹ್ನ 11.00 ಗಂಟೆಗೆ

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಮಾನ್ಯ ಮುಖ್ಯ ನಗರ ಯೋಜಕರು ಹಾಗೂ ನೋಡಲ್ ಅಧಿಕಾರಿಗಳು. |
| 2 | ಶ್ರೀ ರಮೇಶ್.ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ. |
| 3 | ಶ್ರೀ ಜ್ಯೋತಿ.ಎ.ಡಿ. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು. ಎಸ್.ಡಬ್ಲ್ಯೂಡಿ |
| 4 | ಶ್ರೀ ಭೂದೇವಿ | ತೋಟಗಾರಿಕೆ ಇಲಾಖೆ. ಬಿಬಿಎಂಪಿ. |
| 5 | ಶ್ರೀ ರಘು.ಎನ್.ಎಸ್. | ಆರೋಗ್ಯ ಇಲಾಖೆ. ಗಿರಿನಗರ. |
| 6 | ಶ್ರೀ ಶ್ರೇಯಸ್ | ವಿದ್ಯುತ್ ಇಲಾಖೆ. |
| 7 | ಶ್ರೀ ಆರ್.ರಾಜಶೇಖರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ. ಗಿರಿನಗರ |
| 8 | ಶ್ರೀ ಚಂದವಳ್ಳಿ | ಮಾರ್ಷಲ್, ಗಿರಿನಗರ ವಾರ್ಡ್ |
| 9. | ಶ್ರೀ ರಘು | ಹೆಡ್ ಕಾನ್ಸ್‌ಟೇಬಲ್ ಗಿರಿನಗರ ಪೊಲೀಸ್ ಠಾಣೆ. |
| 10 | ಶ್ರೀ ಸಿದ್ದರಾಜು | ಟ್ರಾಫೀಕ್ ಪಿ.ಎಸ್ ಬಿ.ಎಸ್.ಕೆ ವಾರ್ಡ್ ನಂ-162,ಗಿರಿನಗರ |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಆದ ಶ್ರೀ ಸುನಿಲ್‌ಕುಮಾರ್.ಪಿ ರವರು ಸ್ವ ಪರಿಚಯ ಮಾಡಿಕೊಂಡು ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಗಿರಿನಗರ ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ ಟಿ.ವಿ ಕ್ಯಾಮರಗಳನ್ನು ಎಲ್ಲೆಲ್ಲಿ ಅಳವಡಿಸಿದ್ದಾರೆ ಎಂಬ ಬಗ್ಗೆ ಮಾಹಿತಿಯನ್ನು ಕೊಡುವಂತೆ ಸಂಬಂಧಪಟ್ಟ ಪೋಲೀಸ್ ಇಲಾಖೆಯವರಿಗೆ ತಿಳಿಸಿದ್ದರೂ ಸಹ ಅವರು

ಕೊಟ್ಟಿರುವುದಿಲ್ಲ ಹಾಗಾಗಿ ಮುಂದಿನ ಬಾರಿ ಅದರ ಮಾಹಿತಿಯನ್ನು ಕೊಡುವಂತೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

2. ಗಿರಿನಗರ ವಾರ್ಡ್-162ರ ವ್ಯಾಪ್ತಿಯಲ್ಲಿ Abandoned Vehicles ಎಲ್ಲೆಲ್ಲಿ ಇರುವ ಬಗ್ಗೆ location wise ಮಾಹಿತಿಯನ್ನು ಪಡೆದು ಅವುಗಳನ್ನು ತೆರವುಗೊಳಿಸಲಾಗಿರುತ್ತದೆ ಎಂಬ ಮಾಹಿತಿಯನ್ನು ಅಧ್ಯಕ್ಷರ ಗಮನಕ್ಕೆ ತರಲಾಗಿರುತ್ತದೆ.

3. ವಾರ್ಡ್‌ನಲ್ಲಿ ಇರುವ un-scientific Road humps ಅನ್ನು ತೆರವುಗೊಳಿಸುವಂತೆ ಮತ್ತು painting ಮಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

4. ಆರೋಗ್ಯ ಇಲಾಖೆ ಕಾಮಗಾರಿ ಮತ್ತು ಪೋಲೀಸ್ ಇಲಾಖೆಯವರು ಜಂಟಿಯಾಗಿ ರಸ್ತೆ ಒತ್ತುವರಿ ಮಾಡಿರುವವರ ಮೇಲೆ ಕ್ರಮ ಜರುಗಿಸುವುದು ಮತ್ತು ತೆರವುಗೊಳಿಸಬೇಕೆಂದು ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

5. ವಾರ್ಡ್ ವ್ಯಾಪ್ತಿಯ ಪುಷ್ಪಾಂಜಲಿ ಪಾರ್ಕ್ ಹತ್ತಿರ ಇರುವ E-Toilet ಅನ್ನು ತಕ್ಷಣ ರಿಪೇರಿ ಮಾಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

6. ಅವಲಹಳ್ಳಿ ಬಿ.ಡಿ.ಎ ಪಾರ್ಕ್ ಮತ್ತು ಶ್ರೀವಿದ್ಯಾನಗರ ಪಾರ್ಕ್ ಹತ್ತಿರ ಇರುವ ಸಾರ್ವಜನಿಕ ಶೌಚಲಯವನ್ನು ರಿಪೇರಿ ಮಾಡಿಸಿಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

7. ಬೀದಿ ದೀಪಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡಬೇಕೆಂದು ಮತ್ತು ಅದಕ್ಕೆ ಅಡ್ಡಿಯಾಗಿರುವ ಮರಗಳನ್ನು ಟ್ರಿಮ್ ಮಾಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

8. ವಾರ್ಡ್ ವ್ಯಾಪ್ತಿಯಲ್ಲಿನ ಕೇಕ್ ಆಫ್ ದಿ ಡೇ ಹತ್ತಿರ ಎಸ್.ಡಬ್ಲ್ಯೂ.ಡಿ ಕವರಿಂಗ್ ಸ್ಲ್ಯಾಬ್ ಹಾಳಾಗಿದ್ದು ಅದನ್ನು ತಕ್ಷಣ ತೆಗೆದು ಹೊಸದಾಗಿ ಅಳವಡಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

9. ವಾರ್ಡ್ ವ್ಯಾಪ್ತಿಯಲ್ಲಿ ಗಾರ್ಬೇಜ್ ವಾಹನಗಳನ್ನು ಸರಿಯಾದ ರೀತಿಯಲ್ಲಿ ಪಾರ್ಕಿಂಗ್ ಮಾಡಬೇಕೆಂದು ಮತ್ತು ಅದರ ನಿರ್ವಹಣೆ ಬಗ್ಗೆ ಗಮನಹರಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

10. ಅಮೃತ್ ನಗರೋತ್ಥಾನ ಯೋಜನೆಯಡಿಯಲ್ಲಿ ಎಸ್.ಡಬ್ಲ್ಯೂಡಿ ಅಡಿಯಲ್ಲಿ ವಾರ್ಡ್-162 ರಲ್ಲಿ ಕೈಗೊಳ್ಳಲಾಗುವ ಕಾರ್ಯಗಳ ಬಗ್ಗೆ ಅಂದಾಜು ಪಟ್ಟಿಯನ್ನು ಸಲ್ಲಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

11. ಇತ್ತೀಚಿಗೆ ಕೋವಿಡ್ ಸಂಖ್ಯೆ ಹೆಚ್ಚಾಗಿದ್ದು ಸರಿಯಾದ ರೀತಿಯಲ್ಲಿ ಪರೀಕ್ಷೆ ಮಾಡಬೇಕೆಂದು ಮತ್ತು ಚಿಕಿತ್ಸೆ ಕೊಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

12. ವಾರ್ಡ್‌ನಲ್ಲಿ ಜೂನ್ ತಿಂಗಳಲ್ಲಿ 20 ಕೋವಿಡ್ ಕೇಸ್‌ಗಳು ಬಂದಿದ್ದು ಅದರಲ್ಲಿ 03 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಮತ್ತು 17 ಜನ ಹೋಮ್ ಐಸೋಲೇಷನ್‌ಲ್ಲಿ ಇರುತ್ತಾರೆ ಎಂಬ ಮಾಹಿತಿಯನ್ನು ಮಾನ್ಯ ಅಧ್ಯಕ್ಷರ ಗಮನಕ್ಕೆ ತರಲಾಗಿರುತ್ತದೆ.

"ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು'.

04/01/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಲಯ ಆಯುಕ್ತರು ( ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.